**Akashvani : Bangalore**
**24.08.2024 / 19.35 hrs**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**24.08.2024 / 19.35 hrs**

**<><*<><>*><>**

ಮುಖ್ಯಾಂಶಗಳು

**<><*<><>*><>**

೧. ಉಕ್ರೇನ್ ಪ್ರವಾಸ ಸಂಪನ್ನ; ಶಾಂತಿ ಪುನಸ್ಥಾಪಿಸಲು ಸಕ್ರಿಯ ಪಾತ್ರ ವಹಿಸಲು ಭಾರತ ಸಿದ್ಧ: ಪ್ರಧಾನಿ ನರೇಂದ್ರ ಮೋದಿ

೨. ಮಹಾರಾಷ್ಟ್ರದ ಜಲಗಾಂವ್‌ನಲ್ಲಿ ನಾಳೆ ಲಕ್ಷಾದಿಪತಿ ದೀದಿ ಸಮ್ಮೇಳನ; ೧೧ ಲಕ್ಷ ಹೊಸ ಲಕ್ಷಾದಿಪತಿ ದೀದಿಗಳಿಗೆ ಗೌರವ

೩. ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅಮೆರಿಕ ಪ್ರವಾಸ: ಹಲವು ಒಪ್ಪಂದಗಳಿಗೆ ಸಹಿ

೪. ಪ್ಯಾರಿಸ್ ಪ್ಯಾರಾಲಿಂಪಿಕ್: ಭಾರತೀಯ ಪ್ಯಾರಾ-ಶೂಟಿಂಗ್ ತಂಡ ಫ್ರಾನ್ಸ್‌ಗೆ ಪ್ರಯಾಣ

**<><*<><>*><>**

ಪೋಲೆಂಡ್ ಮತ್ತು ಉಕ್ರೇನ್ ಪ್ರವಾಸದ ನಂತರ ಪ್ರಧಾನಿ ನರೇಂದ್ರ ಮೋದಿ ಇಂದು ಮಧ್ಯಾಹ್ನ ದೆಹಲಿಗೆ ಮರಳಿದ್ದಾರೆ. ಭೇಟಿಯ ಸಂದರ್ಭದಲ್ಲಿ, ಪ್ರಧಾನಿಯವರು ಪೋಲೆಂಡ್ ಪ್ರಧಾನಿ ಡೊನಾಲ್ಡ್ ಟಸ್ಕ್ ಅವರೊಂದಿಗೆ ವಾರ್ಸಾದಲ್ಲಿ ಮಾತುಕತೆ ನಡೆಸಿದರು. ಇಬ್ಬರೂ ನಾಯಕರು ಸಂಬಂಧವನ್ನು ಕಾರ್ಯತಂತ್ರದ ಪಾಲುದಾರಿಕೆಗೆ ನವೀಕರಿಸಲು ನಿರ್ಧರಿಸಿದರು. ಹೆಚ್ಚು ಸ್ಥಿರ, ಸಮೃದ್ಧ ಮತ್ತು ಸುಸ್ಥಿರ ಜಗತ್ತಿಗೆ ದ್ವಿಪಕ್ಷೀಯ, ಪ್ರಾದೇಶಿಕ ಮತ್ತು ಅಂತಾರಾಷ್ಟ್ರೀಯ ಸಹಕಾರವನ್ನು ಬಲಗೊಳಿಸುವ ತಮ್ಮ ಬದ್ಧತೆಯನ್ನು ಉಭಯ ನಾಯಕರು ಪುನರುಚ್ಚರಿಸಿದರು. ಉಕ್ರೇನ್ ಮತ್ತು ಪಶ್ಚಿಮ ಏಷ್ಯಾದಲ್ಲಿನ ಸಂಘರ್ಷಗಳು ಸೇರಿದಂತೆ ಪರಸ್ಪರ ಹಿತಾಸಕ್ತಿಯ ಪ್ರಮುಖ

ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳ ಕುರಿತು ಉಭಯ ನಾಯಕರು ಚರ್ಚಿಸಿದರು. ಉಕ್ರೇನ್‌ನ ಕೈವ್‌ನಲ್ಲಿ ಪ್ರಧಾನಿ ನರೇಂದ್ರ ಮೋದಿ ಮತ್ತು ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್ಸ್ಕಿ ನಿಯೋಗ ಮಟ್ಟದ ಸಭೆ ನಡೆಸಿದರು. ಸಭೆಯಲ್ಲಿ, ಉಕ್ರೇನ್‌ನಲ್ಲಿ ಸಮುದಾಯ ಅಭಿವೃದ್ಧಿ ಯೋಜನೆಗಳು, ಔಷಧ ನಿಯಂತ್ರಣ ಮಾನದಂಡಗಳು, ಸಾಂಸ್ಕೃತಿಕ ವಿನಿಮಯ, ಕೃಷಿ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ದ್ವಿಪಕ್ಷೀಯ ಸಂಬಂಧಗಳನ್ನು ವೃದ್ಧಿಸಲು ನಾಲ್ಕು ಒಪ್ಪಂದಗಳಿಗೆ ಸಹಿ ಹಾಕಲಾಯಿತು. ಉಕ್ರೇನ್ ಮತ್ತು ರಷ್ಯಾ ನಡುವೆ ನಡೆಯುತ್ತಿರುವ ಸಂಘರ್ಷವನ್ನು ಪರಿಹರಿಸಲು ಮಾರ್ಗಗಳನ್ನು ಕಂಡುಕೊಳ್ಳಬೇಕು ಎಂದು ಪ್ರಧಾನಿ ಮೋದಿ ಇದೇ ವೇಳೆ ಪ್ರತಿಪಾದಿಸಿದರು. ಶಾಂತಿ ಪುನಸ್ಥಾಪಿಸಲು ಅಗತ್ಯವಿರುವ ಎಲ್ಲಾ ಪ್ರಯತ್ನಗಳಲ್ಲಿ ಸಕ್ರಿಯ ಪಾತ್ರವನ್ನು ವಹಿಸಲು ಭಾರತ ಸಿದ್ಧವಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಘೋಷಿಸಿದರು.

<><*<><>*><>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ನಾಳೆ ಮಹಾರಾಷ್ಟ್ರದ ಜಲಗಾಂವ್ ಮತ್ತು ರಾಜಸ್ಥಾನದ ಜೋಧ್‌ಪುರಕ್ಕೆ ಭೇಟಿ ನೀಡಲಿದ್ದಾರೆ. ಅವರು ನಾಳೆ ಬೆಳಗ್ಗೆ ಲಕ್ಷಾದಿಪತಿ ದೀದಿ ಸಮ್ಮೇಳನದಲ್ಲಿ ಭಾಗವಹಿಸಲು ಜಲಗಾಂವ್‌ಗೆ ಭೇಟಿ ನೀಡಲಿದ್ದಾರೆ. ೧೧ ಲಕ್ಷ ಹೊಸ ಲಕ್ಷಾದಿಪತಿ ದೀದಿಗಳಿಗೆ ಪ್ರಮಾಣಪತ್ರ ನೀಡಿ, ಗೌರವಿಸುತ್ತಾರೆ. ಜತೆಗೆ ದೇಶಾದ್ಯಂತ ಇರುವ ಲಕ್ಷಾದಿಪತಿ ದೀದಿಗಳೊಂದಿಗೆ ಸಂವಾದ ನಡೆಸಲಿದ್ದಾರೆ. ªÀÄ ಇದೇ ವೇಳೆ ಪ್ರಧಾನಿಯವರು ಎರಡು ಸಾವಿರದ ಐನೂರು ಕೋಟಿ ರೂಪಾಯಿಗಳ ನಿಧಿಯನ್ನು ಬಿಡುಗಡೆ ಮಾಡಲಿದ್ದು, ಇದರಿಂದ ಸುಮಾರು ೪೮ ಲಕ್ಷ ಸ್ವ-ಸಹಾಯ ಗುಂಪುಗಳ ಸದಸ್ಯರಿಗೆ ಪ್ರಯೋಜನವಾಗಲಿದೆ. ಜೊತೆಗೆ ಅವರು ಐದು ಸಾವಿರ ಕೋಟಿ ರೂಪಾಯಿಗಳ ಬ್ಯಾಂಕ್ ಸಾಲ ವಿತರಿಸಲಿದ್ದಾರೆ. ಇದರಿಂದ ಸುಮಾರು ೨೬ ಲಕ್ಷ ಸ್ವ-ಸಹಾಯ ಗುಂಪುಗಳ ಸದಸ್ಯರಿಗೆ ಪ್ರಯೋಜನವಾಗಲಿದೆ. ಲಕ್ಷಾದಿಪತಿ ಯೋಜನೆ ಆರಂಭವಾದಾಗಿನಿಂದ ಇಲ್ಲಿಯವರೆಗೆ ಒಂದು ಕೋಟಿ ಮಹಿಳೆಯರನ್ನು ಲಕ್ಷಾದಿಪತಿ ದೀದಿಗಳನ್ನಾಗಿ ಮಾಡಲಾಗಿದೆ. ಮೂರು ಕೋಟಿ ಲಕ್ಷಾದಿಪತಿ ದೀದಿಗಳನ್ನಾಗಿಸುವ ಗುರಿಯನ್ನು

ಕೇಂದ್ರ ಸರ್ಕಾರ ಹೊಂದಿದೆ. ನಂತರ ಪ್ರಧಾನಿ ಮೋದಿ ರಾಜಸ್ಥಾನದ ಜೋಧಪುರಕ್ಕೆ ಭೇಟಿ ನೀಡಲಿದ್ದಾರೆ. ರಾಜಸ್ಥಾನ ಹೈಕೋರ್ಟ್‌ನ ಪ್ಲಾಟಿನಂ ಜುಬಿಲಿ ಆಚರಣೆಯ ಸಮಾರೋಪ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಲಿದ್ದಾರೆ. ಇದೇ ವೇಳೆ ಅವರು ರಾಜಸ್ಥಾನ ಹೈಕೋರ್ಟ್ ವಸ್ತುಸಂಗ್ರಹಾಲಯವನ್ನು ಉದ್ಘಾಟಿಸಲಿದ್ದಾರೆ.

<><*<><>*><>

ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್ ನಾಲ್ಕು ದಿನಗಳ ಅಮೆರಿಕ ಪ್ರವಾಸದಲ್ಲಿದ್ದು, ಈ ಸಂದರ್ಭದಲ್ಲಿ, ಹಲವು ಒಪ್ಪಂದಗಳಿಗೆ ಸಹಿ ಹಾಕಲಾಗಿದೆ.

ಭಾರತದ ಭದ್ರತೆಯನ್ನು ಸುಧಾರಿಸುವ ನಿಟ್ಟಿನಲ್ಲಿ ಸುಮಾರು ೪೪೩ ಕೋಟಿ ರೂಪಾಯಿ ಮೌಲ್ಯದ ಜಲಾಂತರ್ಗಾಮಿ ವಿರೋಧಿ ಯುದ್ಧ ಉಪಕರಣಗಳನ್ನು ಭಾರತಕ್ಕೆ ರಫ್ತು ಮಾಡಲು ಅಮೆರಿಕ ಸರ್ಕಾರ ಅನುಮೋದನೆ ನೀಡಿದೆ. ಜಲಾಂತರ್ಗಾಮಿ ವಿರೋಧಿ ಯುದ್ಧ ಕಾರ್ಯಾಚರಣೆಯನ್ನು ನಡೆಸುವ ಸಾಮರ್ಥ್ಯವನ್ನು ಹೆಚ್ಚಿಸುವ ಮೂಲಕ ಪ್ರಸ್ತುತ ಮತ್ತು ಭವಿಷ್ಯದ ಬೆದರಿಕೆಗಳನ್ನು ಎದುರಿಸಲು ಭಾರತಕ್ಕೆ ಇದು ಸಹಕಾರಿಯಾಗಿದೆ. ಭಾರತ ಮತ್ತು ಅಮೆರಿಕದ ನಡುವೆ ಇದೇ ಸಂದರ್ಭದಲ್ಲಿ ದ್ವಿಪಕ್ಷೀಯ ಮಾತುಕತೆ ನಡೆದಿದೆ. ಉಭಯ ದೇಶಗಳ ಕಾರ್ಯತಂತ್ರದ ಸಂಬಂಧವನ್ನು ಬಲಪಡಿಸಲು, ಇಂಡೋ-ಪೆಸಿಫಿಕ್ ಮತ್ತು ದಕ್ಷಿಣ ಏಷ್ಯಾ ಪ್ರದೇಶಗಳಲ್ಲಿ ರಾಜಕೀಯ ಸ್ಥಿರತೆ, ಶಾಂತಿ ಮತ್ತು ಆರ್ಥಿಕ ಪ್ರಗತಿಗಾಗಿ ಬಲ ತುಂಬುವ ನಿಟ್ಟಿನಲ್ಲಿ ನಾಯಕರು ಚರ್ಚೆ ನಡೆಸಿದರು.

<><*<><>*><>

ಕೇಂದ್ರ ಗೃಹ ಸಚಿವ ಅಮಿತ್ ಶಾ ಛತ್ತೀಸ್‌ಗಢದಲ್ಲಿ ಇಂದು ನಕ್ಸಲ್ ವಿರೋಧಿ ಕಾರ್ಯಾಚರಣೆ ಕುರಿತು ಸರಣಿ ಸಭೆಗಳನ್ನು ನಡೆಸಿದರು. ಛತ್ತೀಸಗಢವನ್ನು ನಕ್ಸಲ್ ಮುಕ್ತ ರಾಜ್ಯವನ್ನಾಗಿ ಮಾಡುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ಹಲವು ರೀತಿಯ ಕಾರ್ಯಯೋಜನೆಗಳನ್ನು ರೂಪಿಸಿದೆ ಎಂದು ಅವರು ಹೇಳಿದರು. ಇದೇ ಸಂದರ್ಭದಲ್ಲಿ ಅವರು, ಛತ್ತೀಸ್‌ಗಢ ಮತ್ತು ನೆರೆಯ ರಾಜ್ಯಗಳ ಮುಖ್ಯ ಕಾರ್ಯದರ್ಶಿಗಳು ಮತ್ತು ಪೊಲೀಸ್ ಮಹಾನಿರ್ದೇಶಕರ ಅಂತಾರಾಜ್ಯ ಸಮನ್ವಯ ಸಭೆಯಲ್ಲಿ ಪಾಲ್ಗೊಂಡರು.

ಇದಕ್ಕೂ ಮುನ್ನ ಕೇಂದ್ರ ಗೃಹ ಸಚಿವರು, ಛತ್ತೀಸಗಢದ ಚಂಪೇಶ್ವರ ದೇವಸ್ಥಾನಕ್ಕೆ ತೆರಳಿ ವಿಶೇಷ ಪೂಜೆ ಸಲ್ಲಿಸಿದರು. ನಾಳೆ ಬೆಳಗ್ಗೆ ರಾಯ್‌ಪುರದಲ್ಲಿ ನಾರ್ಕೋಟಿಕ್ಸ್ ಕಂಟ್ರೋಲ್ ಬ್ಯೂರೋ ಕಚೇರಿಯನ್ನು ಅಮಿತ್ ಶಾ ಉದ್ಘಾಟಿಸಿ, ಪರಿಶೀಲನಾ ಸಭೆ ನಡೆಸಲಿದ್ದಾರೆ. ನಂತರ ಛತ್ತೀಸ್‌ಗಢದಲ್ಲಿ ಸಹಕಾರಿ ಕ್ಷೇತ್ರದ ವಿಸ್ತರಣೆ ಕುರಿತ ಸಭೆಯ ಅಧ್ಯಕ್ಷತೆ ವಹಿಸಲಿದ್ದಾರೆ.

<><*<><>*><>

ಕೋಲ್ಕತ್ತಾ ಲೈಂಗಿಕ ದೌರ್ಜನ್ಯ ಮತ್ತು ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಕೇಂದ್ರೀಯ ತನಿಖಾ ದಳ-ಸಿಬಿಐ, ಆರ್.ಜಿ.ಕರ್ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯ ಮಾಜಿ ಪ್ರಾಂಶುಪಾಲ ಸಂದೀಪ್ ಘೋಷ್ ಸೇರಿದಂತೆ ಏಳು ಜನರ ಸುಳ್ಳು ಪತ್ತೆ  ಪರೀಕ್ಷೆಯನ್ನು ನಡೆಸಿದೆ. ಪ್ರಕರಣದಲ್ಲಿ ಬಂಧಿತನಾಗಿರುವ ಪ್ರಮುಖ ಆರೋಪಿ ಸಂಜಯ್ ರೈ, ಕೋಲ್ಕತ್ತಾ ಪೊಲೀಸ್‌ನ ಸ್ವಯಂಸೇವಕ ಮತ್ತು ಘಟನೆಗೂ ಮುನ್ನ ಸಂತ್ರಸ್ತೆಯ ಜೊತೆಗಿದ್ದ ನಾಲ್ವರು ವೈದ್ಯರ ಸುಳ್ಳು ಪತ್ತೆ ಪರೀಕ್ಷೆಯನ್ನು ಸಹ ನಡೆಸಲಾಗುತ್ತಿದೆ. ಸುಳ್ಳು ಪತ್ತೆ ಪರೀಕ್ಷೆಗೆ ಅಗತ್ಯವಾದ ಅನುಮೋದನೆಯನ್ನು ಸಿಬಿಐಗೆ ಸೀಲ್ದಾ ನ್ಯಾಯಾಲಯವು ನೀಡಿದೆ. ಏತನ್ಮಧ್ಯೆ, ಕೋಲ್ಕತ್ತಾ ಹೈಕೋರ್ಟ್‌ನ ಆದೇಶದಂತೆ ವಿಶೇಷ ತನಿಖಾ ತಂಡ, ಎಸ್‌ಐಟಿ, ದಾಖಲೆಗಳನ್ನು ಸಿಬಿಐಗೆ ಹಸ್ತಾಂತರಿಸಿದೆ.

<><*<><>*><>

ನೇಪಾಳದ ತನಾಹುನ್ ಜಿಲ್ಲೆಯಲ್ಲಿ ಸಂಭವಿಸಿದ ಬಸ್ ಅಪಘಾತದಲ್ಲಿ ಮೃತಪಟ್ಟ ಹಾಗೂ ಗಾಯಗೊಂಡ ಭಾರತೀಯರಿಗೆ ಪ್ರಧಾನಿ ನರೇಂದ್ರ ಮೋದಿ ಅವರು ಪರಿಹಾರ ಘೋಷಿಸಿದ್ದಾರೆ. ಪ್ರಧಾನಮಂತ್ರಿಗಳ ರಾಷ್ಟ್ರೀಯ ಪರಿಹಾರ ನಿಧಿಯಿಂದ ಮೃತರ ಕುಟುಂಬಗಳಿಗೆ ತಲಾ ಎರಡು ಲಕ್ಷ ರೂಪಾಯಿ ಹಾಗೂ ಗಾಯಗೊಂಡವರಿಗೆ ತಲಾ ೫೦ ಸಾವಿರ ರೂಪಾಯಿಗಳ ಪರಿಹಾರ ನೀಡಲಾಗುತ್ತದೆ. ನೇಪಾಳದಲ್ಲಿ ನಿನ್ನೆ ಸಂಭವಿಸಿದ ಅಪಘಾತದಲ್ಲಿ ೨೭ ಭಾರತೀಯರು ಪ್ರಾಣ ಕಳೆದುಕೊಂಡಿದ್ದು, ಇತರೆ ೧೬ ಮಂದಿ ಗಾಯಗೊಂಡಿದ್ದಾರೆ. ಮೃತರೆಲ್ಲರೂ ಮಹಾರಾಷ್ಟ್ರದವರಾಗಿದ್ದಾರೆ ಎಂದು ಕಠ್ಮಂಡುವಿನಲ್ಲಿರುವ ಭಾರತೀಯ ರಾಯಭಾರ ಕಚೇರಿ ತಿಳಿಸಿದೆ.

<><*<><>*><>

’ಮನ್ ಕಿ ಬಾತ್’ ಕಾರ್ಯಕ್ರಮದಲ್ಲಿ, ನಾಳೆ ಬೆಳಗ್ಗೆ ೧೧ ಗಂಟೆಗೆ, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ದೇಶದ ಜನತೆಯೊಂದಿಗೆ ತಮ್ಮ ಅನಿಸಿಕೆಗಳನ್ನು ಹಂಚಿಕೊಳ್ಳಲಿದ್ದಾರೆ. ಇದು ಮನ್ ಕಿ ಬಾತ್ ಕಾರ್ಯಕ್ರಮದ ೧೧೩ನೇ ಆವೃತ್ತಿಯಾಗಿದೆ. ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನ, ಎಐಆರ್ ನ್ಯೂಸ್ ವೆಬ್‌ಸೈಟ್ ಹಾಗೂ ನ್ಯೂಸ್ ಆನ್ ಏರ್ ಮೊಬೈಲ್ ಆಪ್‌ನ ಎಲ್ಲ ಜಾಲಗಳಲ್ಲಿ ಪ್ರಸಾರವಾಗಲಿದೆ. ಅಲ್ಲದೇ ಎಐಆರ್ ನ್ಯೂಸ್, ಡಿಡಿ ನ್ಯೂಸ್, ಪಿಎಂಒ ಮತ್ತು ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ಚಾನಲ್‌ಗಳಲ್ಲಿ ನೇರ ಪ್ರಸಾರವಾಗಲಿದೆ. ಮನ್ ಕಿ ಬಾತ್ ಹಿಂದಿ ಅವತರಣಿಕೆಯ ನಂತರ ಆಯಾ ಪ್ರಾದೇಶಿಕ ಭಾಷೆಗಳಲ್ಲಿ ಕಾರ್ಯಕ್ರಮ ಮೂಡಿಬರಲಿದೆ.

<><*<><>*><>

ಪ್ಯಾರಿಸ್‌ನಲ್ಲಿ ನಡೆಯಲಿರುವ ಪ್ಯಾರಾಲಿಂಪಿಕ್ ಕ್ರೀಡಾಕೂಟದಲ್ಲಿ ಭಾಗವಹಿಸಲು ೧೦ ಅಥ್ಲೀಟ್‌ಗಳನ್ನು ಒಳಗೊಂಡ ಭಾರತೀಯ ಪ್ಯಾರಾ-ಶೂಟಿಂಗ್ ತಂಡವು ಫ್ರಾನ್ಸ್‌ಗೆ ಪ್ರಯಾಣ ಬೆಳೆಸಿದೆ. ಈ ತಂಡವು ಟೋಕಿಯೊ ಪ್ಯಾರಾಲಿಂಪಿಕ್‌ನಲ್ಲಿ ಎರಡು ಚಿನ್ನ, ಒಂದು ಬೆಳ್ಳಿ ಮತ್ತು ಒಂದು ಕಂಚು ಸೇರಿದಂತೆ ನಾಲ್ಕು ಪದಕಗಳನ್ನು ಗೆದಿತ್ತು. ಈ ಸಾಧನೆಯನ್ನು ಮತ್ತಷ್ಟು ಉತ್ತಮಗೊಳಿಸಲು ಪೈಪೋಟಿ ನಡೆಸಲಿದೆ. ಪ್ಯಾರಿಸ್ ಪ್ಯಾರಾಲಿಂಪಿಕ್ಸ್‌ನ ಶೂಟಿಂಗ್ ವಿಭಾಗದಲ್ಲಿ ಅವನಿ ಲೆಖರಾ, ಮನೀಶ್ ನರ್ವಾಲ್, ಅಮೀರ್ ಅಹ್ಮದ್ ಭಟ್, ರುದ್ರಾಂಶ್ ಖಂಡೇಲ್ವಾಲ್, ಮೋನಾ ಅಗರ್ವಾಲ್, ರುಬಿನಾ ಫ್ರಾನ್ಸಿಸ್, ಸ್ವರೂಪ್ ಮಹಾವೀರ್ ಉನ್ಹಾಲ್ಕರ್, ಸಿದ್ಧಾರ್ಥ ಬಾಬು, ಶ್ರೀಹರ್ಷ ದೇವರಡ್ಡಿ ಮತ್ತು ನಿಹಾಲ್ ಸಿಂಗ್ ಭಾರತವನ್ನು ಪ್ರತಿನಿಧಿಸಲಿದ್ದಾರೆ. ಶೂಟಿಂಗ್ ಸ್ಪರ್ಧೆಯು ಆಗಸ್ಟ್ ೩೦ ರಂದು ಪ್ಯಾರಿಸ್‌ನ ಚಟೌರೊಕ್ಸ್ ಶೂಟಿಂಗ್ ಕೇಂದ್ರದಲ್ಲಿ ಪ್ರಾರಂಭವಾಗಲಿದೆ.

<><*<><>*><>

ಪುಣೆಯ ಪೌಡ್ ಪ್ರದೇಶದಲ್ಲಿ ಇಂದು ಖಾಸಗಿ ಕಂಪನಿಗೆ ಸೇರಿದ ಹೆಲಿಕಾಪ್ಟರ್‌ವೊಂದು ಪತನಗೊಂಡಿದೆ. ವಿಮಾನದಲ್ಲಿದ್ದ ನಾಲ್ವರಿಗೆ ಗಂಭೀರ ಗಾಯಗಳಾಗಿವೆ ಎಂದು

ವರದಿಯಾಗಿದೆ. ಹೆಲಿಕಾಪ್ಟರ್ ಮುಂಬೈನಿಂದ ಹೈದರಾಬಾದ್‌ಗೆ ತೆರಳುತ್ತಿತ್ತು. ತಾಂತ್ರಿಕ ದೋಷ ಮತ್ತು ಪ್ರತಿಕೂಲ ಹವಾಮಾನದಿಂದಾಗಿ ಅಪಘಾತಕ್ಕೀಡಾಗಿದೆ. ಪುಣೆ ಗ್ರಾಮಾಂತರ ಪೊಲೀಸರು ಘಟನಾ ಸ್ಥಳಕ್ಕೆ ಕೂಡಲೇ ಧಾವಿಸಿದ್ದು, ಸ್ಥಳೀಯ ನಿವಾಸಿಗಳ ನೆರವಿನಿಂದ ಗಾಯಾಳುಗಳನ್ನು ಆಸ್ಪತ್ರೆಗೆ ದಾಖಲಿಸಿದ್ದಾರೆ.

**<><*<><>*><>**

ಮುಂದಿನ ೨೪ ಗಂಟೆಗಳ ಕಾಲ ಛತ್ತೀಸಗಢ, ಒಡಿಶಾ, ರಾಜಸ್ಥಾನ, ಮಧ್ಯಪ್ರದೇಶ ಮತ್ತು ಪಶ್ಚಿಮ ಬಂಗಾಳದ ಹಲವೆಡೆ ಧಾರಾಕಾರ ಮಳೆಯಾಗಲಿದೆ ಎಂದು ಭಾರತೀಯ ಹವಾಮನ ಇಲಾಖೆ ಮುನ್ಸೂಚನೆ ನೀಡಿದೆ. ಮುಂದಿನ ೪೮ ಗಂಟೆಗಳ ಕಾಲ ಮಿಜೋರಾಂ, ತ್ರಿಪುರಾ, ಗುಜರಾತ್, ಗೋವಾ ಮತ್ತು ಮಹಾರಾಷ್ಟ್ರದ ಅನೇಕ ಪ್ರದೇಶಗಳಲ್ಲಿ ತೀವ್ರ ಮಳೆಯಾಗಲಿದೆ. ಇದೇ ವೇಳೆ, ಹಿಮಾಚಲ ಪ್ರದೇಶ, ಉತ್ತರಾಖಂಡ, ರಾಜಸ್ಥಾನ, ಜಮ್ಮು-ಕಾಶ್ಮೀರ, ಲಡಾಖ್, ಗಿಲಗಿಟ್, ಪಂಜಾಬ್, ಉತ್ತರ ಪ್ರದೇಶ, ಹರ್ಯಾಣ ಮತ್ತು ದೆಹಲಿಯ ಕೆಲವೆಡೆ ಮುಂದಿನ ಒಂದು ವಾರದ ಕಾಲ ಧಾರಾಕಾರ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ಇನ್ನೊಂದೆಡೆ, ನೆರೆಯ ಚೀನಾದ ಲಿಯಾನಿಂಗ್ ಪ್ರಾಂತ್ಯದ ಹುಲುಡಾವೊ ನಗರದಲ್ಲಿ ತೀವ್ರ ಮಳೆಯಿಂದಾಗಿ ೧೧ ಜನರು ಸಾವನ್ನಪ್ಪಿದ್ದು, ಇತರೆ ೧೪ ಮಂದಿ ನಾಪತ್ತೆಯಾಗಿದ್ದಾರೆ.

**<><*<><>*><>**

ಜಮ್ಮು ಮತ್ತು ಕಾಶ್ಮೀರದಲ್ಲಿ ೫ ಲಕ್ಷ ೬೬ ಸಾವಿರ ಯುವಕರು ಸೇರಿದಂತೆ ೨೩ ಲಕ್ಷ ೨೭ ಸಾವಿರಕ್ಕೂ ಹೆಚ್ಚು ಮತದಾರರು ಮೊದಲ ಹಂತದ ವಿಧಾನಸಭಾ ಚುನಾವಣೆಯ ವೇಳೆ ತಮ್ಮ ಹಕ್ಕು ಚಲಾಯಿಸಲು ಅರ್ಹರಾಗಿದ್ದಾರೆ. ೭ ಜಿಲ್ಲೆಗಳ ೨೪ ವಿಧಾನಸಭಾ ಸ್ಥಾನಗಳಿಗೆ ಸೆಪ್ಟೆಂಬರ್ ೧೮ ರಂದು ಮತದಾನ ನಡೆಯಲಿದೆ. ಕಾಶ್ಮೀರ ವಿಭಾಗದಲ್ಲಿ ಅನಂತನಾಗ್, ಪುಲ್ವಾಮಾ, ಶೋಪಿಯಾನ್, ಕುಲ್ಗಾಮ್ ಜಿಲ್ಲೆಗಳಿಗೆ ಅಧಿಸೂಚನೆಯನ್ನು ಹೊರಡಿಸಲಾಗಿದೆ. ಕಾಶ್ಮೀರ ವಿಭಾಗದಲ್ಲಿ ೧೬ ವಿಧಾನಸಭಾ ಕ್ಷೇತ್ರಗಳು ಮತ್ತು ಜಮ್ಮು ವಿಭಾಗದಲ್ಲಿ ೮ ವಿಧಾನಸಭಾ ಕ್ಷೇತ್ರಗಳಿಗೆ ಮೊದಲ ಹಂತದಲ್ಲಿ ಮತದಾನ ನಡೆಯಲಿದೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*><>**